# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 132
ಸದಸ್ಯರ ಹೆಸರು : ಡಾ|| ಉಮಾಶ್ರೀ
(ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 05.03.2025.
ಉತ್ತರಿಸುವ ಸಚಿವರು : ಕಂದಾಯ ಸಚಿವರು

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಮ್ಯೂಟೇಶನ್, ಭೂ ಪರಿವರ್ತನ ಪ್ರಕ್ರಿಯೆಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಜನ ಸಾಮಾನ್ಯರಿಗೆ ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td>ಬಂದಿದೆ.</td></tr>
<tr><td>ಆ)</td><td>ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು:</td><td rowspan="2">ವಿಜಯನಗರ ಜಿಲ್ಲೆಯಲ್ಲಿ ಮ್ಯೂಟೇಶನ್ ಪ್ರಕ್ರಿಯೆಯಲ್ಲಿ ಕರ್ತವ್ಯಲೋಪವೆಸಗಿರುವ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಆರು ಪ್ರಕರಣಗಳು ದಾಖಲಾಗಿದ್ದು, ಇಲಾಖಾ ವಿಚಾರಣೆ ಪ್ರಗತಿಯಲ್ಲಿರುತ್ತದೆ.<br><br>ಉಳಿದ ಜಿಲ್ಲೆಗಳಲ್ಲಿ ಯಾವುದೇ ಪ್ರಕರಣ ವರದಿಯಾಗಿರುವುದಿಲ್ಲ.<br>ಮುಂದುವರೆದು, ಕಂದಾಯ ಇಲಾಖೆಯು " ಭೂ ಸುರಕ್ಷಾ "ಎಂಬ ತಂತ್ರಾಂಶವನ್ನು ಜಾರಿಗೆ ತರಲಾಗಿದೆ. ಕಂದಾಯ ಇಲಾಖೆಯಲ್ಲಿನ ಮುಖ್ಯವಾದ ದಾಖಲೆಗಳನ್ನು ಸ್ಕ್ಯಾನಿಂಗ್, ಡಿಜಿಟಲೀಕರಣ, ಇಂಡೆಕ್ಸಿಂಗ್ ಮತ್ತು ಕೆಟಲಾಗಿಂಗ್ ಮಾಡಿ ಜನರಿಗೆ ಸುಲಭವಾಗಿ ಸಿಗುವಂತೆ ಮಾಡಲಾಗುತ್ತಿದೆ ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 33 ಟಿ ಆರ್ ಎಂ 2019 ದಿನಾಂಕ:17.10.2000 ರಲ್ಲಿ ಪೌತಿ/ವಾರಸಾ ಖಾತೆ ಆಂದೋಲನಾ ನಡೆಸುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.</td></tr>
<tr><td>ಇ)</td><td>ಎಷ್ಟು ಜನ ಅಧಿಕಾರಿಗಳು ಮತ್ತು ಸಿಬ್ಬಂದಿಯವರ ಮೇಲೆ ಶಿಸ್ತು ಕ್ರಮಕೈಗೊಳ್ಳಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)</td></tr>
</table>

ಸಂಖ್ಯೆ: ಆರ್‌ಡಿ 19 ಎಲ್‌ಜಿಕ್ಯೂ 2025

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು